# <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಶಿಗ್ಗಾಂವ್ ಮತ್ತು ಮಾಗಡಿ ತಾಲ್ಲೂಕು ಪಂಚಾಯತ್‌ಗಳ ಯೋಜನೇತರ ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿವಾಹಕ ಅಧಿಕಾರಿ/ಕಾರ್ಯನಿರ್ವಾಹಕ ಅಧಿಕಾರಿಗಳ ಪತ್ರಗಳು

**ಪ್ರಸ್ತಾವನೆ:**

ಶಿಗ್ಗಾಂವ್ ಮತ್ತು ಮಾಗಡಿ ತಾಲ್ಲೂಕು ಪಂಚಾಯತ್‌ಗಳಲ್ಲಿ ಯೋಜನೇತರ ಕಾರ್ಯಕ್ರಮದಡಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರುಗಳ ಹುದ್ದೆಗಳು ಭರ್ತಿಯಾದ್ದರಿಂದ ಸಿಬ್ಬಂದಿಯವರುಗಳ ವೇತನ ವೆಚ್ಚಕ್ಕಾಗಿ ಒಟ್ಟು ರೂ.49.26ಲಕ್ಷಗಳ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-102-0-61-001 (ಯೋಜನೇತರ) ಕಾರ್ಯಕ್ರಮಗಳಡಿ ಒದಗಿಸುವಂತೆ ಪ್ರಸ್ತಾವಿಸಿದ್ದು ಸದರಿ ಅನುದಾನವನ್ನು 2515-00-197-1-10-300 (ಯೋಜನೇತರ) ಅಡಿ ಲಭ್ಯವಿರುವ ಅನುದಾನದಿಂದ ರೂ.49.62ಲಕ್ಷಗಳನ್ನು ಬಿಡುಗಡೆಗೊಳಿಸುವ ಸಂಬಂಧ ಕೆಳಕಂಡಂತೆ ಆದೇಶಿಸಲಾಗಿದೆ.

## <u>ಸರ್ಕಾರದ ಆದೇಶ ಸಂಖ್ಯೆ: ಆಇ 159 ವೆಚ್ಚ 6/2017 ದಿನಾಂಕ:10ನೇ ಮಾರ್ಚ್ 2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತ್‌ಗಳಿಗೆ ಕಾಲಂ 3ರ ಕಾರ್ಯಕ್ರಮದಡಿಯ ವೇತನ ವೆಚ್ಚಕ್ಕಾಗಿ ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ಕಾಲಂ 5ರನ್ವಯ ಒಟ್ಟು ರೂ.49.62ಲಕ್ಷ (ರೂಪಾಯಿ ನಲವತ್ತೊಂಬತ್ತು ಲಕ್ಷದ ಅರವತ್ತೆರಡು ಸಾವಿರಗಳು ಮಾತ್ರ)ಗಳನ್ನು ಅಡಿ ಬಿಡುಗಡೆಗೊಳಿಸಲಾಗಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1)ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿದ ನಿರ್ದೇಶನದಂತೆ ಕ್ರಮವಹಿಸಿ ವೇತನ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ತಾಲ್ಲೂಕು ಪಂಚಾಯತ್ | ಯೋಜನೇತರ ಕಾರ್ಯಕ್ರಮದ ಲೆಕ್ಕಶೀರ್ಷಿಕೆ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ 2515-00-197-1-10-300 | ಒಟ್ಟು |
|---|---|---|---|---|
| **1** | **2** | **3** | **4** | **5** |
| 1 | ಶಿಗ್ಗಾಂವ | 2515-00-102-0-61-001 | 29.50 | 29.50 |
| 2 | ಮಾಗಡಿ | 2515-00-102-0-61-001 | 19.76 | 19.76 |
| | | | **49.26** | **49.26** |

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರುರವರಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಸಲ್ಲಿಸಿ ಖಜಾನೆಯಲ್ಲಿ ಅಪ್‌ಲೋಡ್ ಮಾಡಿಕೊಳ್ಳುವುದು.)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಪುರುಷೋತ್ತಮ್ ಸಿಂಗ್ ಬಿ.ಹೆಚ್.)**
ವಿಶೇಷಾಧಿಕಾರಿ(ಜಿ.ಪಂ.),
ಆರ್ಥಿಕ ಇಲಾಖೆ

1. ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ
3. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ/ರಾಮನಗರ
4. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಶಿಗ್ಗಾಂವ್/ಮಾಗಡಿ
6. ಉಪ ಖಜಾನೆ ಅಧಿಕಾರಿಗಳು, ಶಿಗ್ಗಾಂವ್/ಮಾಗಡಿ
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ